ಒ) 2007ನೇ ಡಿಸೆಂಬರ್ ಅಂತ್ಯಕ್ಕೆ ಪೂರ್ಣಗೊಳಿಸಲಾಗುವುದೆಂದು ರೈಲ್ವೆಯವರು ತಿಳಿಸಿರುತ್ತಾರೆ.

677(1126) ಶ್ರೀ ಅಪ್ಪಾಸಾಹೇಬ್ ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ಪ್ರವಾಸೋದ್ಯಮ, ಜವಳಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದು, ವಿಶ್ವವಿಖ್ಯಾತ ಗೋಳಗುಮ್ಮಟವನ್ನು ಹೊಂದಿರುವ ಪ್ರವಾಸಿ ತಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ಹಾಗೂ ಇಲ್ಲಿ ಬೆಳೆಯುವ ತೋಟಗಾರಿಕಾ ಬೆಳೆಗಳನ್ನು ರಫ್ತು ಮಾಡಲು ಅನುಕೂಲವಾಗುವಂತೆ ಬಿಜಾಪುರ ನಗರದಲ್ಲಿ ವಿಮಾನ ನಿಲ್ದಾಣ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಾದರೆ, ವಿಮಾನ ನಿಲ್ದಾಣವನ್ನು ಯಾವಾಗ ಪ್ರಾರಂಭಿಸಲಾಗುವುದು;

ಈ) ವಿಮಾನ ನಿಲ್ದಾಣ ಸ್ಥಾಪನೆಗೆ ಈಗಾಗಲೇ ಸ್ಥಳವನ್ನು ಗುರುತಿಸಲಾಗಿದೆಯೇ; ಎಲ್ಲಿ ಗುರುತಿಸಲಾಗಿದೆ;

ಉ) ಇದಕ್ಕಾಗಿ ಎಷ್ಟು ಎಕರೆ ಜಮೀನನ್ನು ಎಲ್ಲಿ ಖರೀದಿಸಲಾಗಿದೆ;

ಊ) ರಾಜ್ಯ ಸರ್ಕಾರವು ವಿಮಾನ ನಿಲ್ದಾಣ ಸ್ಥಾಪಿಸಲು ಭಾರತೀಯ ವಿಮಾನಯಾನ ಪ್ರಾಧಿಕಾರದೊಡನೆ ಪತ್ರ ವ್ಯವಹಾರ ನಡೆಸಿದೆಯೇ (ವಿವರ ನೀಡುವುದು);

ಋ) ವಿಮಾನ ನಿಲ್ದಾಣ ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಹಾಕಿಕೊಂಡಿರುವ ಯೋಜನೆಗಳೇನು (ವಿವರ ನೀಡುವುದು)?

ಶ್ರೀ ಬಿ. ಶ್ರೀರಾಮುಲು (ಪ್ರವಾಸೋದ್ಯಮ, ಜವಳಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು) :

ಅ) ಬಿಜಾಪುರ ನಗರವು ಪ್ರವಾಸಿ ತಾಣವಾಗಿದ್ದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಬಿಜಾಪುರ ನಗರದಲ್ಲಿ ವಿಮಾನ ನಿಲ್ದಾಣ ಸ್ಥಾಪಿಸಲುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದೆ ಇರುತ್ತದೆ.

ಇ) ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರವು ಜೊತೆಗೂಡಿ ತಾಂತ್ರಿಕವಾದ ಹಾಗೂ ಆಡಳಿತಾತ್ಮಕವಾದ ಪರಿಶೀಲನಾ ಕ್ರಮಗಳನ್ನು ಜರುಗಿಸಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದು.

ಈ) ಬಿಜಾಪುರ ತಾಲ್ಲೂಕಿನಲ್ಲಿ ಅರಕೇರಿ ಗ್ರಾಮದಲ್ಲಿ 737 ಎಕರೆ ಹಾಗೂ 10 ಗುಂಟೆ ಜಮೀನಿನ ವಿಸ್ತೀರ್ಣದಲ್ಲಿ ಸುಮಾರು 390 ಎಕರೆ ಹಾಗೂ 18 ಗುಂಟೆಯನ್ನು ವಿಮಾನ ನಿಲ್ದಾಣ ಸ್ಥಾಪನೆಗೆ ಗುರುತಿಸಲಾಗಿದೆ.

ಉ) ಕೇಂದ್ರ ಸರ್ಕಾರದ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ (AAI) ದೊಂದಿಗೆ ರಾಜ್ಯ ಸರ್ಕಾರವು ಪತ್ರ ವ್ಯವಹಾರ ನಡೆಸಿದೆ. ವಿಮಾನ ನಿಲ್ದಾಣ ನಿರ್ಮಾಣ ಕಾರ್ಯವನ್ನು ನಿಖರವಾದ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತಹ ಹಂತವನ್ನು ಇನ್ನೂ ತಲುಪಲಾಗಿಲ್ಲ. ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರವು ಜೊತೆಗೂಡಿ ತಾಂತ್ರಿಕವಾದ ಹಾಗೂ ಆಡಳಿತಾತ್ಮಕವಾದ ಪರಿಶೀಲನಾ ಕ್ರಮಗಳನ್ನು ಜರುಗಿಸಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದು.

678(1138) ಶ್ರೀ ಅಪ್ಪಾಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣ ಶೆಟ್ಟಿ : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬಿಜಾಪುರ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರತರವಾಗಿ ಉಲ್ಬಣಿಸಿ ಪ್ರತಿ ಹತ್ತು ದಿನಗಳಿಗೊಮ್ಮೆ ಪೂರೈಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ನಗರದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮವೇನು;

ಇ) ವಿಜಾಪುರ ನಗರದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಮೂರನೇ ಹಂತದ ಕುಡಿಯುವ ನೀರಿನ ಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಈ ಮೂರನೇ ಹಂತದ ಯೋಜನೆಯ ರೂಪು–ರೇಶೆಗಳೇನು;

ಉ) ಯೋಜನೆಯ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು;

ಊ) ಬಿಜಾಪುರ ನಗರದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಅಥವಾ ಕೈಗೊಳ್ಳಲ್ಲಿರುವ ಶಾಶ್ವತ ಪರಿಹಾರ ಕ್ರಮಗಳೇನು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) :

ಅ) ಬಿಜಾಪುರ ನಗರದಲ್ಲಿ ಕುಡಿಯುವ ನೀರನ್ನು 4–5 ದಿನಗಳಿಗೊಮ್ಮೆ ಸರಬರಾಜು ಮಾಡಲಾಗುತ್ತಿದೆ.

ಆ) ನಗರದ ಕುಡಿಯುವ ನೀರಿನ ಸಮಸ್ಯೆಯ ತುರ್ತು ನಿವಾರಣೆಗಾಗಿ 2005–06ನೇ ಸಾಲಿನ ಬರ ಪರಿಹಾರ ಕಾಮಗಾರಿಯಡಿಯಲ್ಲಿ ಬಿಜಾಪುರ ನಗರದ 49 ಬಡಾವಣೆಗಳಲ್ಲಿ ಕೊಳವೆ ಮಾರ್ಗಗಳನ್ನು ಅಳವಡಿಸುವುದು ಮತ್ತು ಪಂಪಿಂಗ್ ಮಷಿನರಿಗಳ ದುರಸ್ಥಿ ಇತ್ಯಾದಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಹಾಗೂ ಬಿಜಾಪುರ ನಗರಕ್ಕೆ ರೂ. 10.00 ಲಕ್ಷಗಳನ್ನು ದಿನಾಂಕ 16–5–2006ರಂದು ನೀರು ಸರಬರಾಜು ವ್ಯವಸ್ಥೆಯನ್ನು ಸುಧಾರಿಸಲು ಬಿಡುಗಡೆ ಮಾಡಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.